# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:- 2017-18ನೇ ಸಾಲಿನ ಕೃಷಿ ಅಭಿಯಾನ ಕಾರ್ಯಕ್ರಮವನ್ನು "ಸಮಗ್ರ ಕೃಷಿ ಅಭಿಯಾನ" ಎಂದು ಆಯೋಜಿಸುವ ಬಗ್ಗೆ.**

ಓದಲಾಗಿದೆ:-1. ಸರ್ಕಾರದ ಆದೇಶ ಸಂಖ್ಯೆ: ಕೃಇ 68 ಕೃಯೋಕಾ 2017 ದಿ: 01.04.2017.

2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಅಭಿವೃದ್ಧಿ ಆಯುಕ್ತರು ರವರ ಅಧ್ಯಕ್ಷತೆಯಲ್ಲಿ ದಿನಾಂಕ 26.05.2017 ರಂದು ನಡೆದ ಕೃಷಿ ಅಭಿಯಾನ ಕಾರ್ಯಕ್ರಮದ ಸಭೆಯ ನಡವಳಿಗಳು.
3. ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಅಭಿವೃದ್ಧಿ ಆಯುಕ್ತರು ರವರ ಅ.ಸ.ಪ. ಸಂಖ್ಯೆ: ಅಮುಕಾ/166/ಕೃಷಿ ಅಭಿಯಾನ/2017 ದಿನಾಂಕ 27.05.2017.
4. ಆಯುಕ್ತರು, ಕೃಷಿ ಇಲಾಖೆ ರವರ ಏಕಕಡತ ಸಂಖ್ಯೆ: ಕೃ.ನಿ/ಸರೋಶಾ/ ಸಮಗ್ರ ಕೃಷಿ ಅಭಿಯಾನ/ಸ.ಆ/2017-18.

**ಪ್ರಸ್ತಾವನೆ:**

ಮೇಲೆ (1) ರಲ್ಲಿ ಓದಲಾದ ಸರ್ಕಾರದ ಆದೇಶದಲ್ಲಿ, 2016-17ನೇ ಸಾಲಿನಲ್ಲಿ ಕೃಷಿ ಇಲಾಖೆಯಲ್ಲಿ ಅನುಷ್ಠಾನಗೊಳಿಸಿದ ಕೃಷಿ ಅಭಿಯಾನ ಕಾರ್ಯಕ್ರಮವನ್ನು ಮುಂದುವರೆದ ಯೋಜನೆಯನ್ನು ಪರಿಗಣಿಸಿ 2017-18ನೇ ಸಾಲಿನಲಿಯೂ ಸಹ ರಾಜ್ಯದ ಎಲ್ಲಾ ಹೋಬಳಿಗಳಲ್ಲಿ ಅನುಷ್ಠಾನಗೊಳಿಸಲು ಆದೇಶಿಸಲಾಗಿರುತ್ತದೆ.

ಮೇಲೆ (2) ರಲ್ಲಿ ಓದಲಾದ ಅಪರ ಮುಖ್ಯ ಕಾರ್ಯದರ್ಶಿಯವರು ಹಾಗೂ ಅಭಿವೃದ್ಧಿ ಆಯುಕ್ತರು ರವರ ಅಧ್ಯಕ್ಷತೆಯಲ್ಲಿ ದಿನಾಂಕ 26.05.2017 ರಂದು ನಡೆದ ಕೃಷಿ ಅಭಿಯಾನ ಕಾರ್ಯಕ್ರಮದ ಅನುಷ್ಠಾನ ಕುರಿತಂತೆ ಸಭೆ ನಡೆದಿದ್ದು, ಸದರಿ ಸಭೆಯ ನಡವಳಿಗಳನ್ನು ಕೃಷಿ ಅಭಿಯಾನ ಕಾರ್ಯಕ್ರಮಗಳ ಶೀರ್ಷಿಕೆಯನ್ನು **"ಸಮಗ್ರ ಕೃಷಿ ಅಭಿಯಾನ"** ಎಂದು ಮಾರ್ಪಡಿಸಲು ತೀರ್ಮಾನಿಸಲಾಗಿರುತ್ತದೆ.

ಮೇಲೆ (3) ರಲ್ಲಿ ಓದಲಾದ ಅಪರ ಮುಖ್ಯ ಕಾರ್ಯದರ್ಶಿಯವರು ಹಾಗೂ ಅಭಿವೃದ್ಧಿ ಆಯುಕ್ತರು ರವರ ಪತ್ರದಲ್ಲಿ ಕೃಷಿ ಮತ್ತು ಕೃಷಿಯೇತರ ಇಲಾಖೆಗಳು ಹಾಗೂ ಎಲ್ಲಾ ಕೃಷಿಗೆ ಸಂಬಂಧಿಸಿದ ವಿಶ್ವವಿದ್ಯಾಲಯಗಳಿಗೆ 2017-18ನೇ ಸಾಲಿನಲ್ಲಿ ಮೇಲ್ಕಂಡ ಕಾರ್ಯಕ್ರಮವನ್ನು ಸಮಗ್ರ ಕೃಷಿ ಅಭಿಯಾನ ಎಂದು ಆಯೋಜಿಸಲು ಹಾಗೂ ಸದರಿ ಕಾರ್ಯಕ್ರಮದಡಿ ಕೇವಲ ಕೃಷಿ ಇಲಾಖೆಗೆ ಸೀಮಿತವಲ್ಲದೇ ರೈತರಿಗೆ ಸಂಬಂಧಿಸಿದ ಇತರೆ ಅಭಿವೃದ್ಧಿ ಇಲಾಖೆಗಳ ಮಾಹಿತಿಯನ್ನು ಹಾಗೂ ಎಲ್ಲಾ ಇಲಾಖೆಗಳ ಗ್ರಾಮ, ಹೋಬಳಿ, ತಾಲ್ಲೂಕು ಮತ್ತು ಜಿಲ್ಲಾ ಮಟ್ಟದ ಅಧಿಕಾರಿಗಳು ಸಕ್ರೀಯವಾಗಿ ಭಾಗವಹಿಸಬೇಕೆಂದು ಎಲ್ಲಾ ಅಭಿವೃದ್ಧಿ ಇಲಾಖೆಗಳ ಮುಖ್ಯಸ್ಥರುಗಳಿಗೆ, ಜಿಲ್ಲಾಧಿಕಾರಿಗಳಿಗೆ, ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳಿಗೆ ಹಾಗೂ ರಾಜ್ಯದ ಎಲ್ಲಾ ಕೃಷಿ ಮತ್ತು ಕೃಷಿಯೇತರ ವಿಶ್ವವಿದ್ಯಾಲಯಗಳ ಕುಲಪತಿಗಳಿಗೆ ಸೂಚಿಸಿರುತ್ತಾರೆ.

ಮೇಲೆ (4) ರಲ್ಲಿ ಓದಲಾದ ಕೃಷಿ ಆಯುಕ್ತರು ರವರ ಏಕಕಡತ ಪ್ರಸ್ತಾವನೆಯಲ್ಲಿ, 2017-18ನೇ ಸಾಲಿಗೆ ಕೃಷಿ ಅಭಿಯಾನ ಕಾರ್ಯಕ್ರಮವನ್ನು **"ಸಮಗ್ರ ಕೃಷಿ ಅಭಿಯಾನ"** ಎಂದು ಮಾರ್ಪಡಿಸಿ ಸೂಕ್ತ ಆದೇಶ ಹೊರಡಿಸುವಂತೆ ಏಕಕಡತದಲ್ಲಿ ಕೋರಿರುತ್ತಾರೆ.

..2)

ಪ್ರಸ್ತಾವನೆಯನ್ನು ಕೂಲಂಕುಷವಾಗಿ ಪರಿಶೀಲಿಸಿ, ಸರ್ಕಾರವು ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂ: ಕೃಇ 151 ಕೃಮಸ 2017, ಬೆಂಗಳೂರು, ದಿನಾಂಕ: 28.11.2017**

ಪ್ರಸ್ತಾವನೆಯಲ್ಲಿ ವಿವರಿಸಿರುವ ಕಾರಣಗಳ ಹಿನ್ನಲೆಯಲ್ಲಿ, **"ಕೃಷಿ ಅಭಿಯಾನ"** ಕಾರ್ಯಕ್ರಮವನ್ನು **"ಸಮಗ್ರ ಕೃಷಿ ಅಭಿಯಾನ"** ಕಾರ್ಯಕ್ರಮ ಎಂದು ಮಾರ್ಪಡಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಅಜ್ಞಾನುಸಾರ
ಹಾಗೂ ಅವರ ಹೆಸರಿನಲ್ಲಿ

(ಎ. ಪುರುಷೋತ್ ಕುಮಾರ್) 28/11/17
ಸರ್ಕಾರದ ಅಧೀನ ಕಾರ್ಯದರ್ಶಿ,
ಕೃಷಿ ಇಲಾಖೆ (ಯೋಜನೆ)

ಪ್ರತಿಯನ್ನು:-
1) ಪ್ರಧಾನ ಮಹಾಲೇಖಪಾಲರು(ಜಿ & ಎಸ್ ಎಸ್ ಎ) / (ಇ & ಆರ್ ಎಸ್ ಎ) ಕರ್ನಾಟಕ ಹೊಸ ಕಟ್ಟಡ, ಆಡಿಟ್ ಭವನ, ಬೆಂಗಳೂರು-1.
2) ಪ್ರಧಾನ ಮಹಾಲೇಖಪಾಲರು (ಎ&ಇ), ಕರ್ನಾಟಕ ಪಾರ್ಕ್‌ಹೌಸ್ ರಸ್ತೆ, ಬೆಂಗಳೂರು.
3) ಸರ್ಕಾರದ ಪ್ರಧಾನ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು
4) ಆಯುಕ್ತರು / ನಿರ್ದೇಶಕರು, ಕೃಷಿ ಇಲಾಖೆ, ಶೇಷಾದ್ರಿ ರಸ್ತೆ, ಬೆಂಗಳೂರು
5) ಎಲ್ಲಾ ಜಿಲ್ಲಾಧಿಕಾರಿಗಳು
6) ಎಲ್ಲಾ ಜಿಲ್ಲೆಗಳ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು
7) ಎಲ್ಲಾ ಅಭಿವೃದ್ಧಿ ಇಲಾಖೆಗಳ ಮುಖ್ಯಸ್ಥರುಗಳು
8) ಕುಲಪತಿಗಳು, ಕೃಷಿ ವಿಶ್ವವಿದ್ಯಾಲಯ, ಬೆಂಗಳೂರು/ಧಾರವಾಡ/ರಾಯಚೂರು
9) ಕುಲಪತಿಗಳು, ಕೃಷಿ ಮತ್ತು ತೋಟಗಾರಿಕೆ ವಿಶ್ವವಿದ್ಯಾಲಯ, ಶಿವಮೊಗ್ಗ
10) ಕುಲಪತಿಗಳು, ತೋಟಗಾರಿಕೆ ವಿಶ್ವವಿದ್ಯಾಲಯ, ಬಾಗಲಕೋಟೆ
11) ಕುಲಪತಿಗಳು, ಕರ್ನಾಟಕ ಪಶುವೈದ್ಯಕೀಯ, ಪಶುಸಂಗೋಪನೆ & ಮೀನುಗಾರಿಕೆ ವಿಶ್ವವಿದ್ಯಾಲಯ, ಬೀದರ್,
12) ನಿರ್ದೇಶಕರು, ಖಜಾನೆ ಇಲಾಖೆ, ಬೆಂಗಳೂರು
13) ಸರ್ಕಾರದ ಉಪ ಕಾರ್ಯದರ್ಶಿ-1, ಆರ್ಥಿಕ ಇಲಾಖೆ, ಬೆಂಗಳೂರು.
14) ಸರ್ಕಾರದ ಉಪ ಕಾರ್ಯದರ್ಶಿ ಹಾಗೂ ಆಂತರಿಕ ಆರ್ಥಿಕ ಸಲಹೆಗಾರರು, ಕೃಷಿ ಇಲಾಖೆ.
15) ಸರ್ಕಾರದ ಅಧೀನ ಕಾರ್ಯದರ್ಶಿ (ಸೇವೆಗಳು), ಕೃಷಿ ಇಲಾಖೆ, ಬೆಂಗಳೂರು
16) ಶಾಖೆಯ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.